**2 ನೇ ಅಪರ ನ್ಯಾಯಿಕ ದಂಡಾಧಿಕಾರಿ ಮತ್ತು ಜೆಎಂಎಫ್‌ಸಿ ನ್ಯಾಯಾಲಯ ಮಾಗಡಿ**
**ಕ್ರಿಮಿನಲ್ ಪ್ರಕರಣ ಸಂಖ್ಯೆ :838/2019**
**ಚಾಸಾ :- 03 / ಪ್ರಾಸಾ :- 01**

| | |
|---|---|
| ಹೆಸರು | **ಕೃಷ್ಣಮೂರ್ತಿ** |
| ತಂದೆಯ ಹೆಸರು | **ಲೇಟ್ ದೊಡ್ಡಯ್ಯ** |
| ವಯಸ್ಸು | **52** |
| ಉದ್ಯೋಗ | **ವ್ಯವಸಾಯ** |
| ವಿಳಾಸ | **ವರದೇನಹಳ್ಳಿ** |

ದಿನಾಂಕ: **12-10-2023** ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆ :- ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದ :-**

ಚಾಸಾ-1 ರವರು ನನ್ನ ಅಣ್ಣ. ಚಾಸಾ-2 ರವರು ನನ್ನ ಅಣ್ಣನ ಮಗ. ಚಾಸಾ-5 ರವರು ನನ್ನ ತಾಯಿ. ಚಾಸಾ-4 ರವರು ನಮ್ಮ ಊರಿನವರು. ನ್ಯಾಯಾಲಯದ ಮುಂದೆ ಇರುವ ಆರೋಪಿಗಳು ನನ್ನ ಸಂಬಂಧಿಕರು. ಈ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇರುವುದಿಲ್ಲ. ಈ ಪ್ರಕರಣಕ್ಕೆ ಸಂಬಂಧಿಸಿದಂತೆ ನಾನು ಪೋಲೀಸರ ಮುಂದೆ ಯಾವುದೇ ಹೇಳಿಕೆಯನ್ನು ನೀಡಿರುವುದಿಲ್ಲ. ಚಾಸಾ-1 ರವರು ಮೃತಪಟ್ಟು 4 ರಿಂದ 5 ವರ್ಷಗಳು ಕಳೆದಿರುತ್ತದೆ. ಚಾಸಾ-5 ರವರು ಮೃತಪಟ್ಟು 6 ವರ್ಷಗಳು ಕಳೆದಿದೆ.

**ಈ ಹಂತದಲ್ಲಿ ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ, ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು, ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕರ ಮನವಿಯನ್ನು ಪುರಸ್ಕರಿಸಿ, ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು.**

**ಪಾಟೀ ಸವಾಲು :- ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದ :-**

ಈಗ ಸಾಕ್ಷಿಗೆ ತಾನು ನೀಡಿರುವ ಹೇಳಿಕೆಯ ಭಾಗವಾದ " ನಾನು ಮೇಲ್ಕಂಡ ವಿಳಾಸದಲ್ಲಿ—-------------ಜರುಗಿಸಬೇಕೆಂದು ಕೋರುತ್ತೇನೆ” ಓದಿ

ತಿಳಿಸಲಾಯಿತು.ಸಾಕ್ಷಿಯು ತಾನು ನೀಡಿರುವ ಹೇಳಿಕೆಯನ್ನು ಅಲ್ಲಗಳೆದಿರುತ್ತಾರೆ. ಸದರಿ ಹೇಳಿಕೆಯನ್ನು ನಿಪಿ-1 ಎಂದು ಗುರುತಿಸಲಾಯಿತು. ಆರೋಪಿಗಳು ನನಗೆ ಸಂಬಂಧಿಕರಾದ ಕಾರಣದಿಂದ ಅವರಿಗೆ ಆರೋಪಿಗಳಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು :- ಆರೋಪಿಗಳ ಪರ ಶ್ರೀ. ಆರ್. ಎಸ್, ವಕೀಲರಿಂದ :-**

ಆರೋಪಿಗಳ ಪರವಾಗಿ ಏನು ಪಾಟೀ ಸವಾಲು ಇರುವುದಿಲ್ಲವೆಂದು ತಿಳಿಸಿರುತ್ತಾರೆ.

**ಓ. ಹೇ. ಕೇ. ಸ. ಇ. ಎ. ಒಪ್ಪಿರುತ್ತಾರೆ,**

**2 ನೇ ಅ. ನ್ಯಾ. ದಂ. ಮತ್ತು ಜೆಎಂಎಫ್‌ಸಿ, ಮಾಗಡಿ.**

**2 ನೇ ಅಪರ ನ್ಯಾಯಿಕ ದಂಡಾಧಿಕಾರಿ ಮತ್ತು ಜೆಎಂಎಫ್‌ಸಿ ನ್ಯಾಯಾಲಯ ಮಾಗಡಿ**
**ಕ್ರಿಮಿನಲ್ ಪ್ರಕರಣ ಸಂಖ್ಯೆ ಃ838/2019**
**ಚಾಸಾ ಃ- 06 / ಪ್ರಾಸಾ ಃ- 02**

| | |
|---|---|
| ಹೆಸರು | **ಲಕ್ಷ್ಮಿ ಮುನಿಯಪ್ಪ** |
| ತಂದೆಯ ಹೆಸರು | **ಲೇಟ್ ಪುಟ್ಟಯ್ಯ** |
| ವಯಸ್ಸು | **55** |
| ಉದ್ಯೋಗ | **ವ್ಯವಸಾಯ** |
| ವಿಳಾಸ | **ಬಾಚೇನಹಟ್ಟಿ** |

ದಿನಾಂಕಃ **12-10-2023** ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆ ಃ- ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದ ಃ-**

ನನಗೆ ಈ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇರುವುದಿಲ್ಲ. ಈಗ ನನಗೆ ಒಂದು ದಾಖಲೆಯನ್ನು ತೋರಿಸಿದ್ದು ಅದರಲ್ಲಿ ನನ್ನ ಸಹಿ ಇದೆ. ಸದರಿ ದಾಖಲೆಯು ಪಂಚನಾಮೆಯಾಗಿದೆ. ಪಂಚನಾಮೆಯನ್ನು ನಿಪಿ-2 ಎಂದು ಸಾಕ್ಷಿಯ ಸಹಿಯನ್ನು ನಿಪಿ-2(ಎ) ಎಂದು ಗುರುತಿಸಲಾಯಿತು. ನನಗೆ ನಿಪಿ-2 ರಲ್ಲಿ ಇರುವ ವಿಷಯದ ಬಗ್ಗೆ ಮಾಹಿತಿ ಇರುವುದಿಲ್ಲ.

**ಈ ಹಂತದಲ್ಲಿ ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ, ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು, ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕರ ಮನವಿಯನ್ನು ಪುರಸ್ಕರಿಸಿ, ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು.**

**ಪಾಟೀ ಸವಾಲು ಃ- ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದ ಃ-**

ದಿ.04-05-2015 ರಂದು ಬೆಳಗ್ಗೆ 11 ರಿಂದ 12.30 ರ ಸಮಯದಲ್ಲಿ ಪೋಲೀಸರು ವರದೇನಹಳ್ಳಿ ಗ್ರಾಮ ಸರ್ವೆ ನಂ.33 ರಲ್ಲಿ ಇರುವ ಮಂಗಮ್ಮನವರ ಮನೆಯ ಹಿಂಭಾಗ ನಿಪಿ-2 ರಂತೆ ಪಂಚನಾಮೆಯನ್ನು

ಮಾಡಿಕೊಂಡರು ಎಂದರೆ ಸರಿಯಲ್ಲ. ಸ್ಥಳದಲ್ಲಿ ಇದ್ದ ಬ್ಲಾಸ್ಟ್ ಮಾಡಲು ಕೊರೆದ ರಂಧ್ರದಲ್ಲಿ ಇದ್ದ ಮಣ್ಣು ಮತ್ತು ರಾಸಾಯನಿಕ ವಸ್ತುಗಳಾದ ಕಪ್ಪನೇ ವಸ್ತುಗಳು ಮತ್ತು ಕಲ್ಲಿನ ಚೂರನ್ನು ವಶಪಡಿಸಿಕೊಂಡು ಒಂದು ಪ್ಲಾಸ್ಟಿಕ್ ಡಬ್ಬದಲ್ಲಿ ಹಾಕಿ ಬಿಳಿಯ ಬಟ್ಟೆ ಚೀಲದಲ್ಲಿ ಬಾಯಿಯನ್ನು ಕಟ್ಟಿ ಅದಕ್ಕೆ ಅರಗಿನಿಂದ ಸೀಲ್ ನ್ನು ಮಾಡಿದರು ಎಂದರೆ ಸರಿಯಲ್ಲ. ಮೇಲೆ ಹೇಳಿದ ವಸ್ತುಗಳನ್ನು ಪೋಲೀಸರು ಮಾಲುಪಟ್ಟಿ ಸಂ.1 ರಿಂದ 4 ಎಂದು ಗುರುತಿಸಿಕೊಂಡರು ಎಂದರೆ ಸರಿಯಲ್ಲ. ನನ್ನ ಜೊತೆ ಚಾಸಾ-1 ಮತ್ತು 7 ರವರು ನಿಪಿ-1 ಕ್ಕೆ ಸಹಿಯನ್ನು ಮಾಡಿರುತ್ತಾರೆ ಎಂದರೆ ಸರಿಯಲ್ಲ. ಈ ಪ್ರಕರಣದ ಬಗ್ಗೆ ಎಲ್ಲಾ ಮಾಹಿತಿ ಇದ್ದರೂ ಸಹ ಆರೋಪಿಗಳಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲು :- ಆರೋಪಿ ಪರ ಶ್ರೀ. ಆರ್. ಎಸ್, ವಕೀಲರಿಂದ :-**

ಆರೋಪಿಗಳ ಪರವಾಗಿ ಏನು ಪಾಟೀ ಸವಾಲು ಇರುವುದಿಲ್ಲವೆಂದು ತಿಳಿಸಿರುತ್ತಾರೆ.

**ಓ. ಹೇ. ಕೇ. ಸ. ಇ. ಎ. ಒಪ್ಪಿರುತ್ತಾರೆ,**

**2 ನೇ ಅ. ನ್ಯಾ. ದಂ. ಮತ್ತು ಜೆಎಂಎಫ್‌ಸಿ, ಮಾಗಡಿ.**